ವೈಯಕ್ತಿಕ ಕೊಳವೆಬಾವಿಗೆ ರೂ.86,000/– ಮತ್ತು ರೂ.14,000/– ಗಳ ಸಾಲ ಹಾಗೂ ಸಾಮೂಹಿಕ 2 ಕೊಳವೆಬಾವಿಗೆ ರೂ.2,59,000/– ಹಾಗೂ 3 ಕೊಳವೆಬಾವಿಗೆ ರೂ.3,53,000/–ಗಳನ್ನು ಒದಗಿಸಲಾಗುತ್ತಿದೆ. ವೈಯಕ್ತಿಕ ಕೊಳವೆಬಾವಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ.

ಇ ವಿಧಾನ ಸಭಾ ಕ್ಷೇತ್ರವೊಂದಕ್ಕೆ ನೀಡಲಾಗುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು?

2008–09ನೇ ಸಾಲಿನಲ್ಲಿ ಪ್ರತಿ ವಿಧಾನ ಸಭಾ ಮತಕ್ಷೇತ್ರಕ್ಕೆ ಅಲ್ಪಸಂಖ್ಯಾತರ ಜನಸಂಖ್ಯೆಗನುಗುಣವಾಗಿ 2 ರಿಂದ 5 ಕೊಳವೆಬಾವಿಯ ಗುರಿಯನ್ನು ನಿಗದಿಪಡಿಸಲಾಗಿದೆ.

ಈ 2008–09ರಲ್ಲಿ ಕೊಳ್ಳೇಗಾಲ ವಿಧಾನ ಸಭಾ ಕ್ಷೇತ್ರಕ್ಕೆ ನೀಡಲಾದ ಅನುದಾನದ ವಿವರಗಳನ್ನು ಒದಗಿಸುವುದು.

2008–09ನೇ ಸಾಲಿನಲ್ಲಿ ಕೊಳ್ಳೇಗಾಲ ವಿಧಾನ ಸಭಾ ಕ್ಷೇತ್ರಕ್ಕೆ 5 ವೈಯಕ್ತಿಕ ಕೊಳವೆಬಾವಿಗೆ ರೂ.5.00 ಲಕ್ಷಗಳ ಆರ್ಥಿಕ ಗುರಿಯನ್ನು ನಿಗದಿಪಡಿಸಲಾಗಿದೆ.

**26 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ**

**ಬಿ.ಎನ್.ಬಚ್ಚೇಗೌಡ(ಕಾರ್ಮಿಕ ಸಚಿವರು)**

ಅ ರಾಜ್ಯದಲ್ಲಿ ಅಸಂಘಟಿತ ವಲಯಗಳ ಕಾರ್ಮಿಕರೆಂದು ಯಾರನ್ನು ಗುರುತಿಸಲಾಗಿದೆ;

ಸರ್ಕಾರ ಹಾಗೂ ಖಾಸಗಿ ಸಂಸ್ಥೆಗಳ ಸಾಮ್ಯಕ್ಕೆ ಒಳಪಟ್ಟ ಕಾರ್ಖಾನೆ, ನಿಗಮ, ಮಂಡಳಿ ಮತ್ತು ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ಕಾರ್ಮಿಕರನ್ನು ಹೊರತುಪಡಿಸಿ, ಉಳಿದ ಎಲ್ಲಾ ಕಾರ್ಮಿಕರನ್ನು ಅಸಂಘಟಿತ ವಲಯಗಳ ಕಾರ್ಮಿಕರೆಂದು ಗುರುತಿಸಲಾಗಿದೆ.

ಆ ಈ ವಲಯಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಕಲ್ಯಾಣಕ್ಕೆ ಸರ್ಕಾರ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಿದೆ;

ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸದಲ್ಲಿ ತೊಡಗಿರುವ ಅಸಂಘಟಿತ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯು ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು ದಿ:18–01–2007 ರಂದು ಸ್ಥಾಪಿಸಿದ್ದು, ಸದರಿ ಮಂಡಳಿಯಿಂದ ಕಾರ್ಮಿಕರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಕಲ್ಪಿಸಿದೆ.

1. ನೋಂದಾಯಿತ ಕಟ್ಟಡ ಕಾರ್ಮಿಕರು ಮರಣ ಹೊಂದಿದರೆ ಅವರ ಅಂತ್ಯಕ್ರಿಯೆಗಾಗಿ ರೂ.2000/–.

2. ಕಟ್ಟಡ ಕಾರ್ಮಿಕರು ಒಳರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದರೆ ಮೊದಲ 5 ದಿನಗಳಿಗೆ ರೂ.400/- ರಂತೆ ಹಾಗೂ ಉಳಿದ ದಿನಗಳಿಗೆ ರೂ.50/-ರಂತೆ ಗರಿಷ್ಠ ರೂ.2,000/- ವೈದ್ಯಕೀಯ ಚಿಕಿತ್ಸೆಗೆ ಸಹಾಯಧನ.
3. ಕೆಲಸ ಮಾಡುತ್ತಿದ್ದಾಗ ಅಪಘಾತವಾಗಿ ಮರಣ ಹೊಂದಿದರೆ ಅಥವಾ ಶಾಶ್ವತ ಅಂಗವಿಕಲರಾದರೆ ಒಂದು ಲಕ್ಷಗಳ ಪರಿಹಾರ ಧನ.
4. ನೋಂದಾಯಿತಗೊಂಡು ಒಂದು ವರ್ಷ ಆದವರಿಗೆ ಹೈದ್ರೋಗ, ಕಿಡ್ನಿ ಜೋಡಣೆ ಮತ್ತು ಕ್ಯಾನ್ಸರ್ ಶಸ್ತ್ರ ಚಿಕಿತ್ಸೆಗಾಗಿ ಗರಿಷ್ಠ ರೂ.10,000/-ಗಳ ಸಹಾಯಧನ.
5. ಮಹಿಳಾ ಕಟ್ಟಡ ಕಾರ್ಮಿಕರಿಗೆ ಹೆರಿಗೆ ಸೌಲಭ್ಯ ರೂ.4,000/- [ಎರಡು ಬಾರಿ ಮಾತ್ರ].
6. ಕಟ್ಟಡ ಕಾರ್ಮಿಕರ ಅವಲಂಬಿತ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಸಹಾಯಧನ ಎರಡು ಮಕ್ಕಳಿಗೆ ಮಾತ್ರ.
7. ನೊಂದಾಯಿತ ಕಟ್ಟಡ ಕಾರ್ಮಿಕರ ಮೊದಲ ಮದುವೆಗೆ ಅಥವಾ ಅವಲಂಬಿತ ಎರಡು ಮಕ್ಕಳ ಮದುವೆಗೆ ರೂ.5,000/-ಗಳ ಸಹಾಯಧನ.
8. ನಿರ್ಮಾಣ ಕೆಲಸದ ಉಪಕರಣ ಖರೀದಿಸಲು ರೂ.5,000/-ಗಳ ಸಾಲ.

ಇ ಇದಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಸರ್ಕಾರ ವೆಚ್ಚ ಮಾಡಿರುವ ಹಣವೆಷ್ಟು

ಇದಕ್ಕಾಗಿ ಸರ್ಕಾರ ವೆಚ್ಚ ಮಾಡಿರುವುದಿಲ್ಲ. ಖಾಸಗಿ ಹಾಗೂ ಸರ್ಕಾರಿ ಸ್ವಾಮ್ಯದ ಕಟ್ಟಡ ನಿರ್ಮಾಣಗಾರರಿಂದ ಸುಂಕ ಸಂಗ್ರಹಿಸಿ ಇದನ್ನು ಕಾರ್ಮಿಕರ ಕಲ್ಯಾಣಕ್ಕೆ ಬಳಸಲಾಗುತ್ತಿದೆ. ಇದುವರೆಗೆ ರೂ.14,60,600/-ಗಳನ್ನು ಕಟ್ಟಡ ಕಾರ್ಮಿಕರ ಕಲ್ಯಾಣಕ್ಕೆ ವೆಚ್ಚ ಮಾಡಲಾಗಿದೆ.

ಈ ರಾಜ್ಯದಲ್ಲಿ ಗಾರ್ಮೆಂಟ್ಸ್ ವಲಯದಲ್ಲಿ ಕೆಲಸ ಮಾಡುತ್ತಿರುವ ಟೈಲರ್‌ಗಳ ಕಲ್ಯಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

ಟೈಲರ್‌ಗಳ ಕಲ್ಯಾಣಕ್ಕೆ ಸರ್ಕಾರವು ಈವರೆಗೆ ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲ.

ಉ ಇವರುಗಳ ಕಲ್ಯಾಣಕ್ಕಾಗಿ ಒಂದು ನಿಗಮವನ್ನು ಸ್ಥಾಪಿಸುವ ಪ್ರಸ್ತಾಪ ವೇನಾದರೂ ಸರ್ಕಾರದ ಮುಂದಿದೆಯೇ?

ಟೈಲರ್‌ಗಳ ಕಲ್ಯಾಣಕ್ಕೆ ಪ್ರತ್ಯೇಕವಾಗಿ ನಿಗಮ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇರುವುದಿಲ್ಲ. ಆದರೆ ಸದರಿ ಕಾರ್ಮಿಕರನ್ನು ಅಸಂಘಟಿತ ವಲಯದ ಕಾರ್ಮಿಕರೆಂದು ಗುರುತಿಸಲಾಗಿದ್ದು, ಅಸಂಘಟಿತ ಕಾರ್ಮಿಕರ ರಾಜ್ಯ ಮಂಡಳಿ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ.